ಕವಿತೆ

# ಭೂಮಿ ತೂಗುವ ಹಕ್ಕಿ

ಈ ಬೆಳ್ಳಾನೆ ಬೆಳಗಿನಲ್ಲಿ
ಮುಂಬಾಗಿಲ ಅಂಗಳದಲ್ಲಿ
ಎಳೆ ಬಿಸಿಲೊಳಗೆ ಬಾಲ ಕುಣಿಸುತ್ತಾ
ಭೂಮಿಯನ್ನೇ ತೂಗುತ್ತಿದೆಯಲ್ಲಾ
ಎಲಾ! ಪುಟಾಣಿ ಚುರುಕು ಹಕ್ಕಿ
ಯಾರಿಟ್ಟರೋ ಹೆಸರು?
ಭೂಮಿ ತೂಗುವ ಹಕ್ಕಿ.

ಮೇಲಕ್ಕೊಮ್ಮೆ ಕೆಳಕ್ಕೊಮ್ಮೆ
ತೂಗಿದಷ್ಟೂ ತೂಗಿದಷ್ಟೂ
ಮೇಲಕ್ಕೂ ಏರುವುದಿಲ್ಲ;
ಕೆಳಕ್ಕೂ ಇಳಿಯುವುದಿಲ್ಲ.
ಸಮತೋಲನದ ಸಮಭಾರವಂತೂ
ಸದ್ಯಕ್ಕೆ ಸಾಧ್ಯವೇ ಇಲ್ಲವೆ?
ಅತ್ತೊಮ್ಮೆ ಇತ್ತೊಮ್ಮೆ
ಮುಗಿಯದ ಶತಪಥ.


ಪಾತಾಳಕ್ಕಿಳಿದ ಇಲ್ಲಿಯ ದುಃಖ
ಮುಗಿಲು ಮುಟ್ಟಿರುವಾಗ
ಅಲ್ಲಿಯ ರೋದನ
ಕ್ಷಣಕ್ಕೊಮ್ಮೆ ಹತೋಟಿ ತಪ್ಪುವ
ಬದುಕ ಸಂತೆಯ
ಭಾರ ವಹಿವಾಟಿನ ನಡುವೆ
ಪುಕ್ಕದ ಅಳತೆಗೋಲು
ಹಿಡಿತಕ್ಕೆ ದಕ್ಕುವುದಿಲ್ಲ.

ಹಟಕಟ್ಟಿ ಉಸಿರೊತ್ತಿ
ಬಿರುಸಿನಲ್ಲಿ ಒಯ್ದಷ್ಟೇ
ರಭಸದಲ್ಲಿ ರಪಕ್ಕನೆ ಪ್ರತಿಬಾರಿ
ನೆಲಕ್ಕಾತು ಹೋಗುವ ವಿಫಲ ಪ್ರಯತ್ನ
ನೋಡುತ್ತಾ ನಿಂತ ನೆಲವೂ
ನೆಟ್ಟ ಆಗಸವೂ
ಅರೆಗಳಿಗೆ ಕಂಪಿಸಿದರೂ...

ಹಕ್ಕಿ ಬಾಲ ಕುಣಿಸುತ್ತಲೇ ಇದೆ
ಜಗದ ಭಾರವನ್ನೆಲ್ಲಾ ಹೆಕ್ಕಿ ಹೆಕ್ಕಿ
ಪುಕ್ಕದಲ್ಲಿಟ್ಟು ತೂಗುತ್ತಲೇ ಇದೆ
ನಿರುಕಿಸುತ್ತಾ ನಿಂತ ಅಂಗಳದೆದೆ
ಈ ಗಳಿಗೆಯಲ್ಲಾದರೂ
ಹಗುರಗೊಳ್ಳುತ್ತಿದೆ.

ದಕ್ಕಿದ ನಿರಾಳತೆಗೆ
ಅತ್ತ ಇತ್ತ ನುಲಿಯುತ್ತಾ
ಪುರ್ರನೆ ಹಾರಿದೆ ಹಕ್ಕಿ
ತೂಗಿಕೊಳುವ ಕಾತರತೆಯಲ್ಲಿ
ಮತ್ತೆ ರಚ್ಚೆ ಹಿಡಿದಿದೆ ಭೂಮಿ.

● ಸ್ಮಿತಾ ಅಮೃತರಾಜ್
ಸಂಪಾಜೆ



ನಾಗೇಶ ಹೆಗಡೆ